ಇ) ಪ್ರಸ್ತುತ ಶೈಕ್ಷಣಿಕ ವರ್ಷದಲ್ಲಿ ಪ್ರವೇಶದಿಂದ ಯಾರೂ ವಂಚಿತರಾಗಿರುವುದಿಲ್ಲ.

ಈ) ಮತ್ತು ಉ) ಪ್ರಥಮ ಪಿ.ಯು.ಸಿ. ವಿಜ್ಞಾನ ವಿಭಾಗಕ್ಕೆ 200506ನೇ ಸಾಲಿನಲ್ಲಿ ಒಬ್ಬ ವಿದ್ಯಾರ್ಥಿ ಪ್ರವೇಶ ಪಡೆದಿರುತ್ತಾರೆ. ದ್ವಿತೀಯ ಪಿ.ಯು.ಸಿ. ತರಗತಿಗೆ 30 ವಿದ್ಯಾರ್ಥಿಗಳು ಪ್ರವೇಶ ಪಡೆದಿರುತ್ತಾರೆ. ವಿಜ್ಞಾನ ವಿಭಾಗದಲ್ಲಿ ಗಣಿತ ಉಪನ್ಯಾಸಕರ 2003ರಲ್ಲಿ ನಿವೃತ್ತಿ ಹೊಂದಿದ್ದು, ಸದರಿ ಹುದ್ದೆಯು ಖಾಲಿ ಇರುತ್ತದೆ. ಉಳಿದಂತೆ ಭೌತಶಾಸ್ತ್ರ, ರಸಾಯನಶಾಸ್ತ್ರ, ವಿಷಯಗಳಿಗೆ ಉಪನ್ಯಾಸಕರಿರುತ್ತಾರೆ. ಜೀವಶಾಸ್ತ್ರ ಉಪನ್ಯಾಸಕರು ವರ್ಗಾವಣೆ ಹೊಂದಿರುತ್ತಾರೆ. ಸದರಿ ಖಾಲಿ ಇರುವ ಉಪನ್ಯಾಸಕರನ್ನು ಸಮೀಪದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಂದ ನಿಯೋಜನೆಯ ಮೇಲೆ ನೇಮಕ ಮಾಡಿಕೊಂಡು ಪಾಠ ಪ್ರವಚನಗಳಿಗೆ ತೊಂದರೆಯಾಗದಂತೆ ಕ್ರಮ ಕೈಗೊಳ್ಳಲಾಗುವುದು.

5796 (6576) ಶ್ರೀ ಸಿಂಧೂರ ಜಿ. ರಾಜಶೇಖರ (ಶಿಗ್ಗಾಂವ್): ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಶಿಗ್ಗಾಂವ್ ತಾಲ್ಲೂಕು ಬಂಕಾಪುರ ಕಾಲೇಜಿನಲ್ಲಿ ಪೀಠೋಪಕರಣ ಹಾಗೂ ಗ್ರಂಥಾಲಯಕ್ಕೆ ಪುಸ್ತಕ ಕಾಂಪೌಂಡ್ ಗೋಡೆ ಅವಶ್ಯಕತೆ ಇರುವುದು ಸರ್ಕಾರದ ಗಮನದಲ್ಲಿದೆಯೇ;

ಆ) ಪೀಠೋಪಕರಣ ಹಾಗೂ ಪುಸ್ತಕ ಇಲ್ಲದೇ ವಿದ್ಯಾರ್ಥಿ/ ವಿದ್ಯಾರ್ಥಿನಿಯರಿಗೆ ತೊಂದರೆಯಾಗುತ್ತಿರುವುದು ನಿಜವೇ;

ಇ) ಹೊಸದಾಗಿ ನಿರ್ಮಿಸಿರುವ ಕಟ್ಟಡಕ್ಕೆ ಕಾಂಪೌಂಡ್ ಗೋಡೆ ಇರದೇ ಇರುವುದರಿಂದ ಕಟ್ಟಡಕ್ಕೆ ಹಾನಿಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಹಾಗಿದ್ದಲ್ಲಿ, ಈ ಅವಶ್ಯಕತೆಗಳನ್ನು ಪೂರೈಸಲಿಕ್ಕೆ ಸರ್ಕಾರ ಯಾವಾಗ ಕ್ರಮ ಕೈಗೊಳ್ಳುತ್ತದೆ;

ಶ್ರೀ ಆರ್. ರಾಮಲಿಂಗಾರೆಡ್ಡಿ, (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ಶಿಗ್ಗಾಂವ್ ತಾಲ್ಲೂಕು ಬಂಕಾಪುರ ಗ್ರಾಮದಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜಿರುವುದಿಲ್ಲ. ಆದರೆ ಇಲ್ಲಿ ಕರ್ನಾಟಕ ಕೀರ್ತಿ ಪದವಿ ಪೂರ್ವ ಕಾಲೇಜು [ಅನುದಾನರಹಿತ] ಇರುತ್ತದೆ. ಇದು ಸರ್ಕಾರದ ಅನುದಾನದ ವ್ಯಾಪ್ತಿಗೆ ಬರುವುದಿಲ್ಲ. ಸಂಬಂಧಿಸಿದ ಆಡಳಿತ ಮಂಡಳಿಯೇ ಈ ಸೌಕರ್ಯಗಳನ್ನು ಒದಗಿಸಬೇಕಾಗುತ್ತದೆ.

ಆ) ಇದು ಖಾಸಗಿ ಅನುದಾನ ರಹಿತ ಕಾಲೇಜಾಗಿರುವುದರಿಂದ ಸಂಬಂಧಿಸಿದ ಆಡಳಿತ ಮಂಡಳಿಯು ಇವುಗಳನ್ನು ಒದಗಿಸುವ ಮೂಲಕ ತೊಂದರೆ ನಿವಾರಿಸಬೇಕಾಗುತ್ತದೆ.

ಇ) ಇದು ಖಾಸಗಿ ಅನುದಾನ ರಹಿತ ಕಾಲೇಜಾಗಿರುವುದರಿಂದ ಕಟ್ಟಡಕ್ಕೆ ಹಾನಿಯಾಗುತ್ತಿರುವುದನ್ನು ತಡೆಯಲು ಸಂಬಂಧಿಸಿದ ಆಡಳಿತ ಮಂಡಳಿಯು ಕ್ರಮಕೈಗೊಳ್ಳಬೇಕಾಗಿದೆ.

ಈ) ಅನುದಾನರಹಿತ ಕಾಲೇಜುಗಳು ತಮ್ಮ ಸಂಪನ್ಮೂಲಗಳಿಂದಲೇ ಈ ಅವಶ್ಯಕತೆಗಳನ್ನು ಪೂರೈಸಿಕೊಳ್ಳಬೇಕಾಗುತ್ತದೆ. ಈ ಅವಶ್ಯಕತೆಗಳನ್ನು ಪೂರೈಸಲು ಕ್ರಮ ತೆಗೆದುಕೊಳ್ಳುವಂತೆ ಆಡಳಿತ ಮಂಡಳಿಗೆ ತಿಳಿಸಲ್ಲಾಗುವುದು.